**<u>ಅಸಲು ದಾವಾ ಸಂಖ್ಯೆಃ - 207/2021</u>** **ಪಿ.ಡಬ್ಲ್ಯೂ:-1**

ದಿನಾಂಕಃ **27-09-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

ಈ ದಾವೆಯನ್ನು ಸಲ್ಲಿಸಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಈ ದಾವೆಯನ್ನು ದಾವಾ ಆಸ್ತಿಯ ಮಾಲೀಕರು ಎಂದು ಮತ್ತು ಪ್ರತಿವಾದಿ ವಾದ ಆಸ್ತಿಗೆ ತೊಂದರೆಯನ್ನು ಕೊಡುತ್ತಿದ್ದಾರೆ ಎಂದು ದಾವೆಯನ್ನು ಸಲ್ಲಿಸಿರುತ್ತೇನೆ. ದಾವಾ ಆಸ್ತಿಯನ್ನು ನಮ್ಮ ತಂದೆಯವರು ಭೀಮಚಾರ್ ಬಿನ್ ಗುರುರಾಜಚಾರ್ ರವರಿಂದ ಖರೀದಿ ಮಾಡಿರುತ್ತಾರೆ. ಭೀಮಚಾರ್ ರವರಿಗೆ ದಾವಾ ಆಸ್ತಿಯು ಹೇಗೆ ಬಂತು ಎಂಬ ವಿಚಾರ ನನಗೆ ಗೊತ್ತಿಲ್ಲ. ದಾವಾ ಆಸ್ತಿಯನ್ನು ನಮ್ಮ ತಂದೆಯವರು ಖರೀದಿ ಮಾಡುವ ಪೂರ್ವದಲ್ಲಿ ಭೀಮಚಾರ್ ರವರ ಹೆಸರಿನಲ್ಲಿ ಇದ್ದ ಬಗ್ಗೆ ಯಾವುದೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ದಾವಾ ಆಸ್ತಿಯನ್ನು ನಮ್ಮ ತಂದೆಯವರು ಖರೀದಿ ಮಾಡಿದ ನಂತರ ದಾವಾ ಆಸ್ತಿಯ ಖಾತೆ ಮತ್ತು ಪಹಣಿ ತಮ್ಮ ಹೆಸರಿಗೆ ಬದಲಾವಣೆ ಮಾಡಿಕೊಡುವಂತೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ಅರ್ಜಿಯನ್ನು ಕೊಟ್ಟ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯು ನಮ್ಮ ತಂದೆಯ ಹೆಸರಿನಲ್ಲಿ ಇದ್ದ ಬಗ್ಗೆ ಋಣಭಾರ ರಹಿತ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ದಾವಾ ಆಸ್ತಿಯನ್ನು ನಮ್ಮ ತಂದೆಯವರು 1955-56 ನೇ ಸಾಲಿನಲ್ಲಿ ಖರೀದಿ ಮಾಡಿರುತ್ತಾರೆ ಆದರೆ ನಿರ್ದಿಷ್ಟವಾದ ದಿನಾಂಕ ನನಗೆ ಗೊತ್ತಿಲ್ಲ. ನನ್ನ ತಂದೆಯ ಮರಣ ಪ್ರಮಾಣ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಮತ್ತು ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. ಗಿರಿಯಜ್ಜಿ ಮಲ್ಲಪ್ಪ ನನಗೆ ಅಜ್ಜನಾಗಬೇಕು. ನನ್ನ ತಂದೆ ಬಸಪ್ಪರವರು ರಾಮಪ್ಪ ಬಿನ್ ಮಂಗನಕೊಪ್ಪ ತೀರ್ಥಪ್ಪರವರಿಗೆ ಸರ್ವೆ ನಂ. 4/21 ರಲ್ಲಿ 2 ಎಕರೆ 10 ಗುಂಟೆ ಜಮೀನಿನಲ್ಲಿ ಪೂರ್ವಭಾಗದಲ್ಲಿ 37½ ಗುಂಟೆ ಜಮೀನನ್ನು ಇಟ್ಟುಕೊಂಡು ಉಳಿದ ಜಮೀನನ್ನು ಮಾರಾಟ ಮಾಡಿರುತ್ತಾರೆ. ನಮ್ಮ ತಂದೆಯವರು 37 ½ ಗುಂಟೆ ಜಮೀನನ್ನು ಇಟ್ಟುಕೊಂಡ ಬಗ್ಗೆ ಉದ್ದ ಅಥವಾ ಅಗಲ

ಎಂಬ ವಿಸ್ತೀರ್ಣವನ್ನು ನಿರ್ದಿಷ್ಟವಾಗಿ ನಮೂದು ಮಾಡಿಲ್ಲ ಎಂದರೆ ಸರಿ. ದಾವಾ ಆಸ್ತಿಯ ಖಾತೆ ಬದಲಾವಣೆಗೆ ಸಂಬಂಧಿಸಿದಂತೆ ನಮ್ಮ ತಂದೆಯವರಾಗಲೀ, ನನಗಾಲೀ, ಅಥವಾ ನನ್ನ ಮಕ್ಕಳುಗಳಾಗಲೀ ಯಾವುದೇ ಕ್ರಮವನ್ನು ತೆಗೆದುಕೊಂಡಿರುವುದಿಲ್ಲ ಎಂದರೆ ಸರಿ.

ಮುಂದುವರೆದ ಪಾಟೀ ಸವಾಲನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.